**<u>ದಿನಾಂಕ 26.03.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.</u>**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 1** ಎಂದು, ದೂರಿನ ದೃಢೀಕೃತ ಪ್ರತಿಯನ್ನು **ನಿಪಿ 2** ಎಂದು, ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿಯನ್ನು **ನಿಪಿ 3** ಎಂದು, ಅಮಾನತ್ತು ಪಂಚನಾಮೆಯ ದೃಢೀಕೃತ ಪ್ರತಿಯನ್ನು **ನಿಪಿ 4** ಎಂದು, ಐಎಮ್‌ವಿ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 5** ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು **ನಿಪಿ 6** ಎಂದು, ಡಿಸ್ಚಾರ್ಜ್ ಸಮರಿಯನ್ನು **ನಿಪಿ 7** ಎಂದು, ಮೋಟಾರು ವಾಹನ ಕಾಯ್ದೆಯ ಕಲಂ 133 ರಡಿ ನೀಡಿರುವ ನೋಟೀಸುಗಳು ಮತ್ತು ಸದರಿ ನೋಟೀಸುಗಳಿಗೆ ನೀಡಿರುವ ಉತ್ತರಗಳ ದೃಢೀಕೃತ ಪ್ರತಿಗಳನ್ನು ಕ್ರಮವಾಗಿ **ನಿಪಿ 8 ಮತ್ತು 9** ಎಂದು, ಸಾಕ್ಷಿದಾರರ ಹೇಳಿಕೆಗಳೊಂದಿಗೆ ಹಾಜರುಪಡಿಸಿರುವ ದೋಷಾರೋಪಣ ಪಟ್ಟಿಯ ದೃಢೀಕೃತ ಪ್ರತಿಯನ್ನು **ನಿಪಿ 10** ಎಂದು, ಮೆಡಿಕಲ್ ಬಿಲ್ಲುಗಳನ್ನು **ನಿಪಿ 11** ಎಂದು, ಹಣ ಪಾವತಿ ರಶೀದಿಗಳನ್ನು **ನಿಪಿ 12** ಎಂದು, ಒಳರೋಗಿ ದಾಖಲಾತಿಯನ್ನು **ನಿಪಿ 13** ಎಂದು, ಲ್ಯಾಬ್ ವರದಿಗಳನ್ನು **ನಿಪಿ 14** ಎಂದು, ಹೊರರೋಗಿ ದಾಖಲಾತಿಯನ್ನು **ನಿಪಿ 15** ಎಂದು, ಕ್ಷ-ಕಿರಣಗಳನ್ನು **ನಿಪಿ 16** ಎಂದು, ವೇತನ ಪಟ್ಟಿಯನ್ನು **ನಿಪಿ 17** ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**
**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**